**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀಮತಿ ವೀಣಾ ಅಚ್ಚಯ್ಯ ಎಸ್. ಇವರು ನಿಯಮ-72ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಹೇಳಿಕೆ**

**ವಿಷಯ: -**

ಕೊಡವ ಅಧ್ಯಯನ ಪೀಠವು ಸುಮಾರು 10 ವರ್ಷಗಳ ಹಿಂದೆ ಮಂಗಳೂರು ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಸ್ಥಾಪನೆಗೊಂಡು, ಮಂಗಳಗಂಗೋತ್ರಿಯ ಆವರಣದಲ್ಲಿ ಕಾರ್ಯ ನಿರ್ವಹಿಸುತ್ತಾ ಬಂದಿರುತ್ತದೆ.

"ವಿಶ್ವದಲ್ಲೇ ಅತ್ಯಂತ ವಿಶಿಷ್ಟ ಹಾಗೂ ವಿಭಿನ್ನವಾದ ಸಂಸ್ಕೃತಿ, ಆಚಾರ-ವಿಚಾರ, ಸಂಪ್ರದಾಯಗಳನ್ನು ಹೊಂದಿರುವ ಹಾಗೂ ದೇಶಸೇವೆ ಮತ್ತು ಕ್ರೀಡಾಕ್ಷೇತ್ರಕ್ಕೆ ಮಹತ್ತರ ಕೊಡುಗೆ ನೀಡಿರುವ ಕೊಡವ ಜನಾಂಗಕ್ಕೆ" ಸಂಬಂಧಿಸಿದ ಅಧ್ಯಯನ ಪೀಠವು ಆರ್ಥಿಕ ಸಂಪನ್ಮೂಲಗಳ ಕೊರತೆಯಿಂದಾಗಿ ಇದುವರೆಗೂ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಲು ಸಾಧ್ಯವಾಗಿರುವುದಿಲ್ಲ.

ಆದುದರಿಂದ ಕೊಡವ ಅಧ್ಯಯನ ಪೀಠದ ಸ್ಥಾಪನೆಯ ಹಿಂದಿನ ಉದ್ದೇಶ ಹಾಗೂ ಧ್ಯೇಯಗಳು ಈಡೇರಲು ಅನುವಾಗುವಂತೆ ಹಾಗೂ ಅತ್ಯಂತ ಕ್ರಿಯಾಶೀಲ ಹಾಗೂ ಪರಿಣಾಮಕಾರಿಯಾಗಿ ಪೀಠವು ಕಾರ್ಯ ನಿರ್ವಹಿಸಲು ಬೇಕಾದ ಅನುದಾನ ಹಾಗೂ ಇತರೇ ಸೌಲಭ್ಯಗಳನ್ನು ಕೂಡಲೇ ಒದಗಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯ ಬಯಸುತ್ತೇನೆ.

## ಉಪ ಮುಖ್ಯಮಂತ್ರಿಗಳ (ಉನ್ನತ ಶಿಕ್ಷಣ) ಹೇಳಿಕೆ:

ಕೊಡವ ಭಾಷಿಕರ ಇತಿಹಾಸವನ್ನು ಅಧ್ಯಯನ ಮಾಡಲು, ಕೊಡಗಿನ ಸಮಾಜದ ವೈವಿಧ್ಯಮಯ, ಜನಾಂಗಿಕ ಸಾಮಾಜಿಕ ಅಂಶಗಳನ್ನು ಪರಿಶೋಧಿಸಿ ದಾಖಲಿಸಲು ಹಾಗೂ ಕೊಡವ ಭಾಷೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಸಾಧನೆಗಳ ಬಗ್ಗೆ ಅಧ್ಯಯನ ಮಾಡುವ ದೇಯೋದ್ಧೇಶದಿಂದ ರಾಜ್ಯ ಸರ್ಕಾರ ನೀಡಿದ ರೂ.25.00 ಲಕ್ಷಗಳ ಮೂಲನಿಧಿಯೊಂದಿಗೆ ದಿನಾಂಕ 19.02.2008ರಂದು ಕೊಡವ ಅಧ್ಯಯನ ಪೀಠವನ್ನು ಮಂಗಳೂರು ವಿಶ್ವವಿದ್ಯಾಲಯಲ್ಲಿ ಸ್ಥಾಪಿಸಲಾಗಿದೆ.

ಪ್ರಸ್ತುತ ರೂ.25.00 ಲಕ್ಷಗಳ ಮೂಲನಿಧಿಯನ್ನು ವೃದ್ಧಿಸುವ ಮೂಲಕ ಕೊಡವ ಅಧ್ಯಯನ ಪೀಠದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಕಾರ್ಯಗತಗೊಳಿಸಲು ಅನುವಾಗುವಂತೆ ಸದರಿ ಪೀಠಕ್ಕೆ ರೂ.2.00 ಕೋಟಿಗಳ ಹೆಚ್ಚುವರಿ ಅನುದಾನವನ್ನು ಒದಗಿಸುವಂತೆ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸಲಾಗುತ್ತಿದೆ.

**ಸಂಖ್ಯೆ: ಇಡಿ 14 ಯುಡಿವಿ 2020**

(ಡಾ. ಅಶ್ವತ್ ನಾರಾಯಣ್ ಸಿ.ಎನ್)

ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ ವಿಜ್ಞಾನ
ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಮತ್ತು ಜೀವನೋಪಾಯ)